3025:(4002)

ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುತ್ತೂರು ತಾಲ್ಲೂಕು ಹೊಸಮಠದಲ್ಲಿ ಕುಮಾರಧಾರ ನದಿಯ ಹೊಳೆತ್ತುವ ಕೆಲಸಕ್ಕೆ ಸರ್ಕಾರದಿಂದ ನಿಗದಿಪಡಿಸಿದ ಮೊತ್ತವೆಷ್ಟು?

ಆ) ಈ ಕಾಮಗಾರಿಯನ್ನು ಯಾರಿಗೆ ವಹಿಸಿಕೊಡಲಾಗಿದೆ?

ಇ) ಈ ಕಾಮಗಾರಿಗಳನ್ನು ಯಾವಾಗ ಪೂರ್ಣ ಮಾಡಲಾಗುವುದು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ರಾಜ್ಯ ಸಚಿವರು):

ಅ) 1998-99ನೇ ಸಾಲಿನ ಆಯವ್ಯಯದಲ್ಲಿ 11.00 ಲಕ್ಷ ರೂ.ಗಳ ಅಂದಾಜು ಮೊತ್ತದೊಂದಿಗೆ ಸೇರಿದ್ದು 3.30 ಲಕ್ಷ ರೂ.ಗಳ ಅನುದಾನ ನಿಗದಿಪಡಿಸಲಾಗಿದೆ.

ಆ) ಈ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಶ್ರೀ ಎಂ.ಕುಇಮು, ಒಂದನೇ ದರ್ಜೆ ಗುತ್ತಿಗೆದಾರರು ಪರ್ಲಂಪಾಡಿ, ಪುತ್ತೂರು(ದ.ಕ.) ಇವರಿಗೆ ವಹಿಸಿಕೊಡಲಾಗಿದೆ.

ಇ) ಸದರಿ ಕಾಮಗಾರಿಯ ಸ್ಥಳವನ್ನು ವಹಿಸಿಕೊಂಡ ದಿನಾಂಕದಿಂದ 3 ತಿಂಗಳೊಳಗೆ ಮುಗಿಸಲಾಗುವುದು.

ಮಲೆನಾಡು ಪ್ರದೇಶಾಬಿವೃದ್ಧಿ ಮಂಡಳಿಯಿಂದ ಕ್ರಿಯಾ ಯೋಜನೆಗಳ ಮಂಜೂರಾತಿ

3027:(4090)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಹೈದರಾಬಾದ್ ಕರ್ನಾಟಕ

ಅಭಿವೃದ್ಧಿ ಮಂಡಳಿಯಿಂದ 1998-99ನೇ ಸಾಲಿನ ಕಾಮಗಾರಿಗಳ ಕ್ರಿಯಾ ಯೋಜನೆಗಳನ್ನು ಸರ್ಕಾರಕ್ಕೆ ಕಳುಹಿಸಲಾಗಿದೆಯೇ?

ಆ) ಕಳುಹಿಸಿದ್ದಲ್ಲಿ, ಯಾವ ದಿನಾಂಕಗಳಂದು ಕಳುಹಿಸಲಾಗಿದೆ ಸರ್ಕಾರ ಈ ಕ್ರಿಯಾ ಯೋಜನೆಗೆ ಮಂಜೂರಾತಿ ನೀಡಿದೆಯೇ?

ಇ) ಹಾಗಿಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣವೇನು?

ಶ್ರೀ ಕೆ.ವೆಂಕಟೇಶ್ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು):

ಅ) ಹೌದು.

ಆ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯು ಪರಿಷ್ಕೃತ ಕ್ರಿಯಾ ಯೋಜನೆಯನ್ನು 22.10.98ರಂದು ಸರ್ಕಾರಕ್ಕೆ ಸಲ್ಲಿಸಿದ್ದು ಸರ್ಕಾರವು 24.10.98ರಂದು ಈ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದೆ. ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಯು ಪರಿಷ್ಕೃತ ಕ್ರಿಯಾ ಯೋಜನೆಯನ್ನು 12.10.98ರಂದು ಸಲ್ಲಿಸಿದ್ದು, ಈ ಕ್ರಿಯಾ ಯೋಜನೆಗೆ ಸರ್ಕಾರವು 20.10.98ರಂದು ಅನುಮೋದನೆ ನೀಡಿದೆ.

ಇ) ಉದ್ಭವಿಸುವುದಿಲ್ಲ.

ಆಳಂದ ತಾಲ್ಲೂಕಿನಲ್ಲಿ ದಶಲಕ್ಷ ಬಾವಿ ಯೋಜನೆಯಡಿಯಲ್ಲಿ ಪಂಪಸೆಟ್‌ಗಳಿಗೆ ವಿದ್ಯುತ್ ಸಂಪರ್ಕ

3028:(4147)

ಶ್ರೀ ಸುಭಾಷ್ ಆರ್.ಗುತ್ತೇದಾರ್ (ಆಳಂದ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಳಂದ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಿಂದ ವಿದ್ಯುತ್ ಸಂಪರ್ಕ ಕಲ್ಪಿಸಿದ ಫಲಾನುಭವಿಗಳೆಷ್ಟು; ಹಾಗೂ ಬಾಕಿ ಉಳಿದಿರುವುದು ಎಷ್ಟು?

ಆ) ಕಳೆದ ಮೂರು ವರ್ಷಗಳಿಂದ ದಶಲಕ್ಷ ಬಾವಿ ಯೋಜನೆಯಡಿಯಲ್ಲಿ 5 ಕಂಬಗಳಿಗಿಂತ ಕಡಿಮೆ ಇರುವ ನೀರಾವರಿ ಪಂಪುಸೆಟ್ಟುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ ನೀರಾವರಿ ಪಂಪುಗಳೆಷ್ಟು; ಉಳಿದಿರುವುದು ಎಷ್ಟು; ಮತ್ತು ವಿದ್ಯುತ್ ಸಂಪರ್ಕ